**MAY 02, 2026**

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯ ಸರ್ಕಾರ, 2025–26ನೇ ಸಾಲಿನ** ಬಜೆಟ್‌ನಲ್ಲಿ ಪ್ರಕಟಿಸಿದಂತೆ, ಧಾರವಾಡ ಜಿಲ್ಲೆ, ಹುಬ್ಬಳ್ಳಿ ಬಿಡನಾಳದ ಆರ್.ಕೆ ಪಾಟೀಲ್ ಕರ್ನಾಟಕ ಪಬ್ಲಿಕ್ ಶಾಲೆ ಸೇರಿದಂತೆ ರಾಜ್ಯದ ವಿವಿಧೆಡೆಗಳ ಒಟ್ಟು 23 ಸರ್ಕಾರಿ ಪ್ರೌಢಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳಾಗಿ ಉನ್ನತೀಕರಿಸುವ ಆದೇಶ ಹೊರಡಿಸಿದೆ. ನೂತನ ಕಾಲೇಜುಗಳಿಗೆ ಪ್ರಥಮ ಭಾ ೆಯಾಗಿ ಕನ್ನಡ, ದ್ವಿತೀಯ ಭಾ ೆಯಾಗಿ ಇಂಗ್ಲಿ ್ ಹಾಗೂ ವಾಣಿಜ್ಯ ವಿಭಾಗವನ್ನು ಮಂಜೂರು ಮಾಡಲಾಗಿದ್ದು, ಆಯಾ ಕಾಲೇಜುಗಳಿಗೆ ಪ್ರತ್ಯೇಕ ಸಂಕೇತ ಸಂಖ್ಯೆಗಳನ್ನು ನಿಗದಿಪಡಿಸಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ತಿಳಿಸಿದೆ. ಬೋಧನಾ ಪ್ರಕ್ರಿಯೆಗೆ ಅನುಕೂಲವಾಗುವಂತೆ, ಕಡಿಮೆ ಕಾರ್ಯಭಾರವಿರುವ ಉಪನ್ಯಾಸಕರನ್ನು ನಿಯಮಾನುಸಾರ ಈ ಕಾಲೇಜುಗಳಿಗೆ ನಿಯೋಜಿಸಲು, ಜಿಲ್ಲಾ ಉಪ ನಿರ್ದೇಶಕರಿಗೆ ಸೂಚನೆ ನೀಡಲಾಗಿದೆ ಎಂದು ಇಲಾಖೆ ಎಕ್ಸ್ ಮಾಧ್ಯಮದ ಮೂಲಕ ತಿಳಿಸಿದೆ.

<><><>

**ಶಿಕ್ಷಣ ಕ್ಷೇತ್ರಕ್ಕೆ ರಾಜ್ಯ ಸರ್ಕಾರವು** ಹೆಚ್ಚಿನ ಆದ್ಯತೆ ನೀಡಬೇಕು. ಶಾಲೆಗಳ ಮೂಲಸೌಕರ್ಯ ವೃದ್ಧಿ, ಶಿಕ್ಷಕರ ನೇಮಕಾತಿ, ತರಬೇತಿ ಹಾಗೂ ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಲು ಸಮಗ್ರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಲಹೆ ನೀಡಿದರು.ಬಾಗಲಕೋಟೆ ಜಿಲ್ಲೆ ಮುಧೋಳದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಭವಿ ್ಯ ವಿದ್ಯಾರ್ಥಿಗಳ ಮೇಲೆ ಅವಲಂಬಿತವಾಗಿದೆ. ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವುದು ಸರ್ಕಾರದ ಪ್ರಮುಖ ಜವಾಬ್ದಾರಿ ಎಂದರು.

<><><>

**ಉಚ್ಚ ನ್ಯಾಯಾಲಯದ ಅದೇಶದಂತೆ,** 2023 ರ ಚಿಕ್ಕಮಗಳೂರು ಜಿಲ್ಲೆ, ಶೃಂಗೇರಿ ವಿಧಾನ ಸಭಾ ಕ್ಷೇತ್ರದ, ಅಂಚೆ ಮತಗಳ ಮರು ಎಣಿಕೆ ಕಾರ್ಯವು ಇಂದು ಚಿಕ್ಕಮಗಳೂರು ನಗರದ, ಐ.ಡಿ. ಎಸ್. ಜಿ ಕಾಲೇಜಿನ ಮತ ಎಣಿಕಾ ಕೇಂದ್ರದಲ್ಲಿ ಆರಂಭಗೊಂಡಿದೆ. ಹಾಲಿ ಶಾಸಕ ಟಿ.ಡಿ ರಾಜೇಗೌಡ, ಪರಾಜಿತ ಅಭ್ಯರ್ಥಿ ಬಿ.ಜೆ.ಪಿಯ ಡಿ.ಎನ್ ಜೀವರಾಜ್ ಸೇರಿದಂತೆ, ಅಂದು ಸ್ಪರ್ಧಿಸಿದ್ದ ಅಭ್ಯರ್ಥಿಗಳ ಸಮ್ಮುಖದಲ್ಲಿ ಮತ ಎಣಿಕೆ ನಡೆಯುತ್ತಿದೆ. ಮತ ಎಣಿಕೆ ಕೇಂದ್ರದ ಸುತ್ತ, ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದ್ದು, ಇಂದು ರಾತ್ರಿವರೆಗೂ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

<><><>

**ರಾಜ್ಯದ ವಿವಿಧೆಡೆಗಳಲ್ಲಿ** ನಿನ್ನೆ ಭಗವಾನ್ ಬುದ್ಧ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು. ಗದಗ ನಗರದಲ್ಲಿ, ಬೌದ್ಧ ಸಂಸ್ಕೃತಿ ಹಾಗೂ ವಿಚಾರಧಾರೆಗಳನ್ನು ಪಸರಿಸುವ ನಿಟ್ಟಿನಲ್ಲಿ, 10 ಕೋಟಿ ರೂಪಾಯಿಗಳ ಭವ್ಯ ಬುದ್ಧ ವಿಹಾರ

ನಿರ್ಮಾಣಕ್ಕೆ ಸರ್ಕಾರ ಅನುಮೋದನೆ ನೀಡಿದೆ, ಈಗಾಗಲೇ ನಗರದ ಮೆಡಿಕಲ್ ಕಾಲೇಜು ಸಮೀಪದ ಗುಡ್ಡದಲ್ಲಿ 3 ಕೋಟಿ ರೂಪಾಯಿ ವೆಚ್ಚದ ಭವ್ಯ ಬುದ್ಧ ವಿಹಾರ ನಿರ್ಮಾಣ ಕಾರ್ಯ ಆರಂಭಗೊಂಡಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್. ಕೆ. ಪಾಟೀಲ ಹೇಳಿದರು. ನಗರದ ಜಿಲ್ಲಾಡಳಿತ ಭವನದಲ್ಲಿ ಆಯೋಜಿತ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಭಗವಾನ್ ಬುದ್ಧನ ಶಾಂತಿ ಹಾಗೂ ಸಹಬಾಳ್ವೆಯ ಸಂದೇಶಗಳು ಇಂದು ಹೆಚ್ಚು ಪ್ರಸ್ತುತವಾಗಿವೆ ಎಂದರು.

<><><>

**ವಿಜಯನಗರ ಜಿಲ್ಲೆ ಹೊಸಪೇಟೆ** ನಗರದಲ್ಲಿ, ವಿವಿಧ ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ, 2 ಸಾವಿರದ 570 ನೇ ಬುದ್ಧ ಜಯಂತಿ ಕಾರ್ಯಕ್ರಮ ಜರುಗಿತು.

<><><>

**ಯಾದಗಿರಿ ನಗರದ ಲುಂಬಿನಿ** ಉದ್ಯಾನವನದಲ್ಲಿ ಆಯೋಜಿತ, ಬುದ್ಧ ಜಯಂತಿ ಕಾರ್ಯಕ್ರಮವನ್ನು, ಬೋಧಿ ಸಸಿಗೆ ನೀರುಣಿಸುವ ಮೂಲಕ ಶಾಸಕ ಚನ್ನಾರೆಡ್ಡಿ ತುನ್ನೂರ ಉದ್ಘಾಟಿಸಿದರು.

<><><>

**ವಿಜಯನಗರ** ಜಿಲ್ಲೆಯಲ್ಲಿ ಅಸಂಘಟಿತ ವಲಯದ 7 ಸಾವಿರ ಕಾರ್ಮಿಕರನ್ನು ಗುರುತಿಸಿ, ನೊಂದಾಯಿಸಲಾಗಿದೆ. ಸರ್ಕಾರದ ಹಲವು ಯೋಜನೆಗಳನ್ನು ಕಲ್ಪಿಸಲಾಗುತ್ತಿದೆ. ಬಿರು ಬೇಸಿಗೆ ಹಿನ್ನೆಲೆ, ಕಾರ್ಮಿಕರಿಗೆ ಕೆಲಸದ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಶೌಚಾಲಯಗಳ ಸೌಲಭ್ಯ ಒದಗಿಸುವಂತೆ ಮಾಲಿಕರಿಗೆ ನಿರ್ದೇಶಿಸಲಾಗಿದೆ ಎಂದು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಹೊಸಪೇಟೆಯ ಕಾರ್ಮಿಕ ನಿರೀಕ್ಷಕರಾದ ಜಿ.ವಿ ಧೂಪದ್.

<><><>

**ರಾಜ್ಯಾದ್ಯಂತ ಮುಂದಿನ** ಏಳು ದಿನಗಳ ಕಾಲ, ಒಣ ಹವೆ ಹಾಗೂ ಬಿಸಿಲಿನ ವಾತಾವರಣ ಮುಂದುವರಿಯಲಿದೆ. ಮಧ್ಯಾಹ್ನದ ನಂತರ, ವಿವಿಧೆಡೆಗಳಲ್ಲಿ ಮೋಡ ಕವಿದ ವಾತಾವರಣದ ಸಾಧ್ಯತೆಯಿದ್ದು, ಅಲ್ಲಲ್ಲಿ ಗುಡುಗು, ಸಿಡಿಲು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

**ಹಾಸನ ಜಿಲ್ಲೆ ಚನ್ನರಾಯಪಟ್ಟಣ** ತಾಲೂಕಿನ ಆನೆಕೆರೆಯಲ್ಲಿ ಕಳೆದ 24 ಗಂಟೆಗಳಲ್ಲಿ ದಾಖಲೆಯ ಮಳೆಯಾಗಿದೆ.

<><><>

**ಕೇಂದ್ರ ಸರ್ಕಾರವು ವಾಣಿಜ್ಯ ಬಳಕೆ ಎಲ್.ಪಿ.ಜಿ** ಸಿಲಿಂಡರುಗಳ ದರವನ್ನು, ಮೇ 1 ರಿಂದ ಜಾರಿಗೆ ಬರುವಂತೆ ಏಕಾಏಕಿ 993 ರೂಪಾಯಿಗಳಿಗೆ ಹೆಚ್ಚಳ ಮಾಡಿರುವುದು, ವ್ಯಾಪಾರಸ್ಥರು ಸೇರಿದಂತೆ, ನಾಡಿನ ಪ್ರತಿಯೊಂದು ಮನೆಯ ಮೇಲೂ ದರ ಏರಿಕೆಯ ಪರಿಣಾಮ ಬೀರಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಎಕ್ಸ್ ಖಾತೆ ಮೂಲಕ ಕಳವಳ ವ್ಯಕ್ತಪಡಿಸಿದ್ದಾರೆ.

<><><>

**ಧಾರವಾಡ ತಾಲೂಕು, ಮರೇವಾಡ** ಗ್ರಾಮದಲ್ಲಿ ಆಗಿ ಹುಣ್ಣಿಮೆಯ ದಿನದಂದು ನಂದೀಶ್ವರ ದೇವರ ವಾರ್ಷಿಕ ಜಾತ್ರಾ ಮಹೋತ್ಸವ ಜರುಗಿತು. ಭಕ್ತರ ಜಯಘೋಷದೊಂದಿಗೆ ವೈಭವದ ರಥೋತ್ಸವ ಸಂಪನ್ನಗೊಂಡಿತು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>